ವಿಧೇಯಕ ಮಂಡನೆ

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು) (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 2015 ಅನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಯಿತು.

(ಅನುಬಂಧ–2)

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸಭೆಯ ಮುಂದಿಡಲಾದ ಕಾಗದ ಪತ್ರಗಳ ಪಟ್ಟಿ

(ನಾಲ್ಕನೇ ಪಟ್ಟಿ)

I. ಶ್ರೀ ಹೆಚ್.ಎಸ್. ಮಹದೇವ್ ಪ್ರಸಾದ್ (ಮಾನ್ಯ ಸಹಕಾರ ಸಚಿವರು):–
[ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರ ಪರವಾಗಿ]
ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಅಧಿನಿಯಮ 1966ರ ಕಲಂ 24(4)ರ ಮೇರೆಗೆ

1. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ 2013–14ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ ಮಂಡಿಸುತ್ತೇನೆ.

II. ಶ್ರೀ ಹೆಚ್.ಎಸ್. ಮಹದೇವ್ ಪ್ರಸಾದ್ (ಮಾನ್ಯ ಸಹಕಾರ ಸಚಿವರು):–
(ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಅವರ ಪರವಾಗಿ)
ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ 50(2), (3) ಮತ್ತು 47(4)ರ ಮೇರೆಗೆ

1. ಬೆಂಗಳೂರು ವಿಶ್ವವಿದ್ಯಾಲಯದ 2011–12ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
2. ಮಂಗಳೂರು ವಿಶ್ವವಿದ್ಯಾಲಯದ 2012–13ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿಗೆ ಅನುಸರಣಾ ವರದಿ ಮಂಡಿಸುತ್ತೇನೆ.

III. ಶ್ರೀ ಹೆಚ್.ಎಸ್. ಮಹದೇವ್ ಪ್ರಸಾದ್ (ಮಾನ್ಯ ಸಹಕಾರ ಸಚಿವರು):– (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶು ಸಂಗೋಪನೆ ಮತ್ತು ಮುಜರಾಯಿ ಸಚಿವರು ಅವರ ಪರವಾಗಿ)

ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮ 1993 (1994ರ ಕೇಂದ್ರ ಅಧಿನಿಯಮ 10)35(4)ನೇ ಪ್ರಕರಣದ ಮೇರೆಗೆ

1. ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ 2013–14 ಸಾಲಿನ ಲೆಕ್ಕಪರಿಶೋಧನಾ ವರದಿ ಮಂಡಿಸುತ್ತೇನೆ.

IV. ಶ್ರೀ ಹೆಚ್.ಎಸ್. ಮಹದೇವ್ ಪ್ರಸಾದ್ (ಮಾನ್ಯ ಸಹಕಾರ ಸಚಿವರು):– (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಅವರ ಪರವಾಗಿ)

ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993ರ ಪ್ರಕರಣ 262(3) ಮತ್ತು 300(5)ರ ಮೇರೆಗೆ:

1. ಕಲಬುರಗಿ (ಗುಲ್ಬರ್ಗಾ) ಜಿಲ್ಲಾ ಪಂಚಾಯತಿಯ 2012–13ನೇ ಸಾಲಿನ ವಾರ್ಷಿಕ ಲೆಕ್ಕ ಮತ್ತು ಲೆಕ್ಕಪರಿಶೋಧನಾ ವರದಿ.
2. ದಕ್ಷಿಣ ಕನ್ನಡ ಜಿಲ್ಲಾಪಂಚಾಯಿತಿಯ (ಮಂಗಳೂರು) 2013–14ನೇ ಸಾಲಿನ ಲೆಕ್ಕಪತ್ರ ಹಾಗೂ ವಾರ್ಷಿಕ ಲೆಕ್ಕಪರಿಶೋಧನಾ ವರದಿ ಮಂಡಿಸುತ್ತೇನೆ.

V. ಶ್ರೀ ವಿನಯ್‌ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:–

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 48(5) ಮತ್ತು 49ರ ಮೇರೆಗೆ

1. ಕಲಬುರಗಿ (ಗುಲ್ಬರ್ಗಾ) ನಗರಾಭಿವೃದ್ಧಿ ಪ್ರಾಧಿಕಾರದ 2014–15ನೇ ಸಾಲಿನ ವಾರ್ಷಿಕ ವರದಿ.
2. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2014–15ನೇ ಸಾಲಿನ ವಾರ್ಷಿಕ ವರದಿ ಮಂಡಿಸುತ್ತೇನೆ.

VI. ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಮಾನ್ಯ ಸಹಕಾರ ಸಚಿವರು):– (ಕೃಷಿ ರಾಜ್ಯ ಸಚಿವರು ಅವರ ಪರವಾಗಿ)

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಅಧಿನಿಯಮ 2009ರ ಕಲಂ 40(3)ರ ಮೇರೆಗೆ

1. ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇದರ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿಗೆ ಅನುಸರಣಾ ವರದಿ.
2. ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಇದರ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು ಉತ್ತರಗಳ ವರದಿ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಧ್ಯಕ್ಷರು: ಮಾನ್ಯ ಉಪಾಧ್ಯಕ್ಷರು ಇಲ್ಲ, ಅವರ ಪರವಾಗಿ ನಾನೇ ವರದಿ ಮಂಡಿಸುತ್ತೇನೆ.